SDUAHER

**SRI DEVARAJ URS ACADEMY OF HIGHER EDUCATION & RESEARCH**

**SRI DEVARAJ URS MEDICAL COLLEGE**

**Tamaka, Kolar**

**UNIVERSITY LIBRARY & LEARNING RESOURCE CENTRE**

Online Newspaper Clipping Service

ವಿಜಯ ಕರ್ನಾಟಕ

**Dated, Friday, 16th June– 2017** **Pg.No.09**

# ಖಾಸಗಿ ವೈದ್ಯಕೀಯ ವಿಧೇಯಕ ವಿರೋಧಿಸಿ ಇಂದು ರಾಜ್ಯಾದ್ಯಂತ ವೈದ್ಯರ ಪ್ರತಿಭಟನೆ

## ತುರ್ತು ಸೇವೆ ಹೊರತುಪಡಿಸಿ ಸಾಮಾನ್ಯ ಚಿಕಿತ್ಸೆ ಸೇವೆ ಸಂಪೂರ್ಣ ಬಂದ್

**ವಿಕ ಸುದ್ದಿಲೋಕ** ಬೆಂಗಳೂರು

ದುಬಾರಿ ಶುಲ್ಕ ವಿಧಿಸುವ ಖಾಸಗಿ ಆಸ್ಪತ್ರೆಗಳಿಗೆ ಕಡಿವಾಣ ಹಾಕಲು 'ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ - 2017' ಜಾರಿಗೆ ಮುಂದಾಗಿರುವ ರಾಜ್ಯ ಸರಕಾರದ ಕ್ರಮ ವಿರೋಧಿಸಿ ಖಾಸಗಿ ಮತ್ತು ಸರಕಾರಿ ಆಸ್ಪತ್ರೆಗಳ ವೈದ್ಯರು ಶುಕ್ರವಾರ ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಸಲಿದ್ದಾರೆ.

ರಾಜ್ಯಾದ್ಯಂತ ನಡೆಯಲಿರುವ ಈ ಪ್ರತಿಭಟನೆಯಲ್ಲಿ 15 ಸಾವಿರಕ್ಕೂ ಹೆಚ್ಚು ವೈದ್ಯರು ಪಾಲ್ಗೊಳ್ಳಲಿದ್ದು, ನಗರದ ರೈಲ್ವೆ ನಿಲ್ದಾಣದಿಂದ ಸ್ವಾತಂತ್ರ್ಯ ಉದ್ಯಾನದವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಿದ್ದಾರೆ. ಪ್ರತಿಭಟನೆ ಹಿನ್ನೆಲೆಯಲ್ಲಿ ಶುಕ್ರವಾರ ಆಸ್ಪತ್ರೆಗಳಲ್ಲಿ ಒಳರೋಗಿಗಳ ಚಿಕಿತ್ಸೆ ಹಾಗೂ ತುರ್ತು ಸೇವೆ ಹೊರತುಪಡಿಸಿ, ಹೊರ ರೋಗಿಗಳ ವಿಭಾಗದಲ್ಲಿ ಸೇವೆಗಳು ಸ್ಥಗಿತಗೊಳ್ಳಲಿವೆ. ಪ್ರತಿಭಟನೆಗೆ ಸರಕಾರಿ ಆಸ್ಪತ್ರೆ ವೈದ್ಯರು ಬೆಂಬಲ ಸೂಚಿಸಿದ್ದರಿಂದ ಆರೋಗ್ಯ ಸೇವೆಯಲ್ಲಿ ವ್ಯತ್ಯಯವಾಗುವ ಸಾಧ್ಯತೆಗಳಿವೆ.

''ಉದ್ದೇಶಿತ ವಿಧೇಯಕದಿಂದ ಖಾಸಗಿ ಆಸ್ಪತ್ರೆಗಳ ಸೇವೆಯಲ್ಲಿ ಗುಣಮಟ್ಟ ಕುಸಿಯುತ್ತದೆ. ಕೇವಲ ಖಾಸಗಿ ಆಸ್ಪತ್ರೆಗಳಿಗೆ ಮಾತ್ರ ಏಕೆ ಈ ಕಾನೂನು? ಇದರಲ್ಲಿ ಸರಕಾರಿ ಆಸ್ಪತ್ರೆಗಳನ್ನೂ ಸೇರಿಸಿಕೊಳ್ಳಲಿ. ಆಗ ಸರಕಾರಿ ಆಸ್ಪತ್ರೆಗಳು ಅಭಿವೃದ್ಧಿ ಹೊಂದುತ್ತವೆ. ಬಡ ರೋಗಿಗಳಿಗೆ ಗುಣಮಟ್ಟದ ಸೇವೆ ದೊರೆಯಲು ಸಹಕಾರಿಯಾಗುತ್ತದೆ. 2007ರಲ್ಲಿ ಜಾರಿಯಾದ ಕಾಯಿದೆಯನ್ನು ನಾವು ಸ್ವಾಗತಿಸಿದ್ದೇವೆ. ಈವರೆಗೂ ಅದನ್ನು ಪಾಲಿಸಿಕೊಂಡು ಬಂದಿದ್ದೇವೆ. ಅಲ್ಲದೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಸರಕಾರ ನ್ಯಾ. ವಿಕ್ರಮ್‌ಜಿತ್ ಸೇನ್ ನೇತೃತ್ವದಲ್ಲಿ ಸಮಿತಿ ರಚಿಸಿತ್ತು. ಅದರಂತೆ ಸಮಿತಿ ಸದಸ್ಯರು ಎಲ್ಲರ ಸಲಹೆ ಪಡೆದು ಸಲ್ಲಿಸಿದ್ದ ವರದಿಯನ್ನು ತಿರಸ್ಕರಿಸಿರುವ ಸರಕಾರ ತನ್ನದೇ ಆದ ನಿಯಮಗಳನ್ನು ರೂಪಿಸಿ ಖಾಸಗಿ ಆಸ್ಪತ್ರೆಗಳ ಮೇಲೆ ಹೇರಲು ಹೊರಟಿದೆ. ಅಲ್ಲದೆ ಇದು ಸಚಿವ ರಮೇಶ್ ಕುಮಾರ್ ಅವರೊಬ್ಬರೇ ವೈಯಕ್ತಿಕವಾಗಿ ಕೈಗೊಂಡಿರುವ ನಿರ್ಧಾರ ಆಗಿದೆ. ಇದರಿಂದ ಹಿಂದೆ ಸರಿದು ಕೇಂದ್ರದ ಮಾದರಿಯಲ್ಲಿ 'ಕರ್ನಾಟಕ ಕ್ಲಿನಿಕ್ ಎಸ್ಟಾಬ್ಲಿಷ್‌ಮೆಂಟ್' ವಿಧೇಯಕ ಜಾರಿಗೆ ತರಲಿ.'' ಎಂದು ಐಎಂಎ ಅಧ್ಯಕ್ಷ ಡಾ. ಪ್ರಭಾಕರ್ ಆಗ್ರಹಿಸಿದ್ದಾರೆ.

### ಮಾತುಕತೆ ಭರವಸೆ ನೀಡಿದ ಸಿಎಂ

ಖಾಸಗಿ ಆಸ್ಪತ್ರೆಗಳ ಒಕ್ಕೂಟದ ಪದಾಧಿಕಾರಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಮಾತುಕತೆ ನಡೆಸಿದರು. ವಿಧೇಯಕ ಜಾರಿಯಾದರೆ ಖಾಸಗಿ ಆಸ್ಪತ್ರೆಗಳನ್ನು ನಡೆಸುವುದು ಕಷ್ಟವಾಗುತ್ತದೆ. ಸಚಿವರಿಗೆ ಆಸ್ಪತ್ರೆಗಳ ಬಗ್ಗೆ ತಪ್ಪು ಕಲ್ಪನೆ ಮೂಡಿದೆ. ಆ ಉದ್ದೇಶದಿಂದಲೇ ಅವರು ಕಡಿವಾಣ ಹಾಕಲು ಹೊರಟಿದ್ದಾರೆ. ಇದು ಸರಿಯಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದರು. ಸಚಿವ ರಮೇಶ್ ಕುಮಾರ್ ಜತೆ ಸಮಾಲೋಚಿಸಿದ ಬಳಿಕ ಪದಾಧಿಕಾರಿಗಳ ಜತೆ ಮತ್ತೊಂದು ಸುತ್ತಿನ ಮಾತುಕತೆ ನಡೆಸುವುದಾಗಿ ಸಿಎಂ ಭರವಸೆ ನೀಡಿದ್ದಾರೆ.

ಸರಕಾರದ ಈ ನಿಲುವು ಖಂಡನೀಯ. ಈ ವಿಧೇಯಕದ ಬದಲಿಗೆ 'ಕರ್ನಾಟಕ ಕ್ಲಿನಿಕ್ ಎಸ್ಟಾಬ್ಲಿಷ್‌ಮೆಂಟ್' ವಿಧೇಯಕ ಜಾರಿಗೆ ತರಲಿ
**- ಡಾ.ಪ್ರಭಾಕರ್**, ಅಧ್ಯಕ್ಷರು, ಭಾರತೀಯ ವೈದ್ಯ ಸಂಘ

ಖಾಸಗಿ ಆಸ್ಪತ್ರೆಗಳಲ್ಲಿ ನಡೆಯುತ್ತಿರುವ ಅಕ್ರಮಗಳಿಗೆ ಕಡಿವಾಣ ಹಾಕುವ ಸಲುವಾಗಿ ಸರಕಾರ 'ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ವಿಧೇಯಕ - 2017' ಜಾರಿಗೆ ಮುಂದಾಗಿದೆ. ಆದರೆ ಇದು ಖಾಸಗಿ ವೈದ್ಯರ ಮೇಲೆ ಗದಾಪ್ರಹಾರ ಮಾಡಿದಂತಿದೆ.
**- ಡಾ.ರಾಮದೇವ್**, ಖಾಸಗಿ ಆಸ್ಪತ್ರೆಗಳ ಒಕ್ಕೂಟ